ಮಾನ್ಯ ವಿಧಾನಸಭಾ ಸದಸ್ಯರಾದ ಶ್ರೀ ಎಂ ಬಿ ರಮೇಶ್ ಬಂಡಿಸಿದ್ದೇಗೌಡ (ಶ್ರೀರಂಗಪಟ್ಟಣ) ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ.2070 ಕ್ಕೆ ಉತ್ತರ

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಜನಾಂಗದ ಶ್ರೇಯೋಭಿವೃಧ್ಧಿಗಾಗಿ ಸರ್ಕಾರ ರೂಪಿಸಿರುವ ಯೋಜನೆಗಳಾವುವು; (ಪೂರ್ಣ ವಿವರ ಒದಗಿಸುವುದು)</td><td>ಹಿಂದುಳಿದ ವರ್ಗಗಳ ಜನಾಂಗದ ಅಭಿವೃಧ್ಧಿಗಾಗಿ ಸರ್ಕಾರವು ಅನುಷ್ಠಾನಗೊಳಿಸುತ್ತಿರುವ ಕಾರ್ಯಕ್ರಮಗಳ ವಿವರಗಳನ್ನು ಅನುಬಂಧ-1 ರಲ್ಲಿ ನೀಡಲಾಗಿದೆ.<br>ಹಾಗೂ ಸದರಿ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ 2015-16 ನೇ ಸಾಲಿಗೆ ಒದಗಿಸಿರುವ ಅನುದಾನದ ವಿವರ ಕೆಳಕಂಡಂತಿರುತ್ತದೆ.<br>(ರೂ. ಲಕ್ಷಗಳಲ್ಲಿ)
<table>
<tr><th>ವಲಯ</th><th>ಒದಗಿಸಿರುವ ಮೊತ್ತ</th></tr>
<tr><td>ರಾಜ್ಯವಲಯ ಯೋಜನೆ</td><td>93041.00</td></tr>
<tr><td>ರಾಜ್ಯವಲಯ ಯೋಜನೇತರ</td><td>530.00</td></tr>
<tr><td>ಜಿಲ್ಲಾವಲಯ ಯೋಜನೆ</td><td>22621.93</td></tr>
<tr><td>ಜಿಲ್ಲಾವಲಯ ಯೋಜನೇತರ</td><td>53367.97</td></tr>
<tr><td>ಒಟ್ಟು</td><td>169560.90</td></tr>
</table></td></tr>
<tr><td>ಆ</td><td>ಹಾಗಿದ್ದಲ್ಲಿ ಈ ಯೋಜನೆಗಳ ಅನುಷ್ಠಾನಕ್ಕಾಗಿ ಸರ್ಕಾರ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ನಿಗಧಿಪಡಿಸಿರುವ ಗುರಿಯೆಷ್ಟು; ಸರ್ಕಾರ ನಿಗಧಿಪಡಿಸಿರುವ ಗುರಿಯನ್ನು ಸಂಪೂರ್ಣ ಅನುಷ್ಠಾನಗೊಳಿಸಲಾಗಿದೆಯೇ; ಒಂದು ವೇಳೆ ಗುರಿಯನ್ನು ಅನುಷ್ಠಾನಗೊಳಿಸಲು ಸಾಧ್ಯವಾಗದಿದ್ದಲ್ಲಿ ಕಾರಣಗಳೇನು; (ಪೂರ್ಣ ವಿವರ ಒದಗಿಸುವುದು)</td><td>ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಅನುಷ್ಠಾನಗೊಳಿಸಲಾಗುತ್ತಿರುವ ಕಾರ್ಯಕ್ರಮಗಳಿಗೆ ಆಯಾ ಜಿಲ್ಲೆಗಳಲ್ಲಿ ಲಭ್ಯವಿರುವ ಅನುದಾನ, ಬೇಡಿಕೆ ಇತ್ಯಾದಿಗಳ ಆಧಾರದ ಮೇಲೆ ಗುರಿಯನ್ನು ನಿಗಧಿಪಡಿಸಿಕೊಳ್ಳಲಾಗುತ್ತದೆ. ಅದರಂತೆ 2015-16 ನೇ ಸಾಲಿನಲ್ಲಿ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ನಿಗಧಿಪಡಿಸಿರುವ ಗುರಿಗಳ ವಿವರಗಳನ್ನು ಅನುಬಂಧ-2 ರಲ್ಲಿ ಸಲ್ಲಿಸಿದೆ. ಸರ್ಕಾರದಿಂದ ಬಿಡುಗಡೆ ಮಾಡಲಾಗಿರುವ ಅನುದಾನವನ್ನು ಸಮರ್ಪಕವಾಗಿ ವಿನಿಯೋಗಿಸಲಾಗಿದೆ.</td></tr>
<tr><td>ಇ</td><td>ಹಾಗಿದ್ದಲ್ಲಿ ಮಂಡ್ಯ ಜಿಲ್ಲೆಗೆ ನಿಗಧಿಪಡಿಸಿರುವ ಗುರಿ ಎಷ್ಟು; (ಮಂಡ್ಯ ವಿಧಾನಸಭಾ ಕ್ಷೇತ್ರಕ್ಕೆ ಯೋಜನವಾರು ಹಂಚಿಕೆ ಮಾಡಿರುವ ಅನುದಾನದ ವಿವರ ಒದಗಿಸುವುದು)</td><td>ಮಂಡ್ಯ ಜಿಲ್ಲೆಗೆ 2015-16 ನೇ ಸಾಲಿನಲ್ಲಿ ನಿಗಧಿಪಡಿಸಿರುವ ಗುರಿಗಳ ವಿವರಗಳನ್ನು ಅನುಬಂಧ-3 ರಲ್ಲಿ ನೀಡಲಾಗಿದೆ.</td></tr>
</table>

29-3-16

**ಆಯುಕ್ತರ ಪರವಾಗಿ,**
**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ**
**ಬೆಂಗಳೂರು**

C:\Users\Admin\Desktop\LAQ 2070.docx

ಅನುಬಂಧ-1

**ಮಾನ್ಯ ವಿಧಾನಸಭಾ ಸದಸ್ಯರಾದ ಶ್ರೀ ಎಂ ಬಿ ರಮೇಶ್ ಬಂಡಿಸಿದ್ದೇಗೌಡ (ಶ್ರೀರಂಗಪಟ್ಟಣ) ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ.2070:**

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಈ ಕೆಳಕಂಡ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿರುತ್ತದೆ.

**I. ಶೈಕ್ಷಣಿಕ ಅಭಿವೃದ್ಧಿ ಕಾರ್ಯಕ್ರಮಗಳು:**

1. ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳು
2. ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳು
3. ಆಶ್ರಮಶಾಲೆಗಳು
4. ಖಾಸಗಿ ಅನುದಾನಿತ ಮೆಟ್ರಿಕ್-ಪೂರ್ವ ವಿದ್ಯಾರ್ಥಿನಿಲಯಗಳು
5. ಖಾಸಗಿ ಅನುದಾನಿತ ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳು
6. ಖಾಸಗಿ ಅನುದಾನಿತ ಅನಾಥಾಲಯಗಳು
7. ವಿದ್ಯಾರ್ಥಿ ನಿಲಯಗಳ ಜೀರ್ಣೋದ್ಧಾರ
8. ವಿದ್ಯಾರ್ಥಿ ನಿಲಯಗಳ ಕಟ್ಟಡ ನಿರ್ಮಾಣ ಮತ್ತು ದುರಸ್ತಿ

**II. ವಿದ್ಯಾರ್ಥಿವೇತನ ಕಾರ್ಯಕ್ರಮಗಳು**

9. ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನ
10. ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ
11. ಶುಲ್ಕ ವಿನಾಯಿತಿ
12. ಊಟ ಮತ್ತು ವಸತಿ ಸಹಾಯ ಯೋಜನೆ – ವಿದ್ಯಾಸಿರಿ

**III. ತರಬೇತಿ ಕಾರ್ಯಕ್ರಮಗಳು**

13. ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಪರೀಕ್ಷಾ ಪೂರ್ವ ತರಬೇತಿ
14. ಕೌಶಲ್ಯ ತರಬೇತಿ ಕಾರ್ಯಕ್ರಮ
15. ನರ್ಸಿಂಗ್/ಪ್ಯಾರಾ ಮೆಡಿಕಲ್ ತರಬೇತಿ
16. ಹೊಲಿಗೆ ತರಬೇತಿ ಕೇಂದ್ರಗಳು
17. ಕಾನೂನು ಪದವೀಧರರಿಗೆ ಸ್ಟೈಪೆಂಡ್
18. ವಿದೇಶಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೆ ನೆರವು ನೀಡುವುದು – ಡಿ ದೇವರಾಜ ಅರಸು ವಿದೇಶಿ ವ್ಯಾಸಂಗ ವೇತನ
19. ಉನ್ನತ ಶ್ರೇಣಿಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ- ಡಿ ದೇವರಾಜ ಅರಸು ಪ್ರತಿಭಾ ಪುರಸ್ಕಾರ
20. ಪೂರ್ಣಾವಧಿ ಪಿ ಹೆಚ್ ಡಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೆ ಫೆಲೋಶಿಪ್
21. ವಿಶ್ವವಿದ್ಯಾಲಯಗಳಲ್ಲಿನ ಹಿಂದುಳಿದ ವರ್ಗಗಳ ಕೋಶಕ್ಕೆ ಅನುದಾನ

**IV. ಅಲೆಮಾರಿ/ಅರೆ ಅಲೆಮಾರಿ ಜನಾಂಗದ ಅಭಿವೃದ್ಧಿ**

1. **ಅಲೆಮಾರಿ/ಅರೆ ಅಲೆಮಾರಿ ಜನಾಂಗದವರಿಗೆ ಅನುಷ್ಠಾನಗೊಳಿಸುತ್ತಿರುವ ಕಾರ್ಯಕ್ರಮಗಳು**

   ಅ. ಮಾಧ್ಯಮಿಕ/ಪ್ರೌಢ ಶಾಲಾ ವಿದ್ಯಾರ್ಥಿಗಳಿಗೆ ವಿಶೇಷ ಪ್ರೋತ್ಸಾಹಧನ

ಆ. ಮೆಟ್ರಿಕ್-ನಂತರದ ವಿದ್ಯಾರ್ಥಿಗಳಿಗೆ ಅರ್ಹತಾ ವಿದ್ಯಾರ್ಥಿ ವೇತನ

ಇ. ಆಶ್ರಮಶಾಲೆಗಳ ಪ್ರಾರಂಭ ಮತ್ತು ನಿರ್ವಹಣೆ

ಈ. ಪ್ರತಿಷ್ಠಿತ ಶಾಲೆಗಳಲ್ಲಿ ಅಧ್ಯಯನ ಮಾಡುತ್ತಿರುವ ನವೀಕರಣ ವಿದ್ಯಾರ್ಥಿಗಳ ಭೋಧನಾ ಶುಲ್ಕ ಹಾಗೂ ವಸತಿನಿಲಯ ಶುಲ್ಕ ಪಾವತಿ

ಉ. ನಿವೇಶನ ರಹಿತರಿಗೆ ನಿವೇಶನ

ಊ. ವಸತಿ ಸೌಲಭ್ಯ

ಎ. ಅಲೆಮಾರಿ/ಅರೆ ಅಲೆಮಾರಿ ಜನಾಂಗದ ಕಾಲೋನಿಗಳಲ್ಲಿ ಮೂಲ ಭೂತ ಸೌಕರ್ಯ ಒದಗಿಸುವುದು.

V. ವಿವಿಧ ಸಮುದಾಯಗಳ ಅಭಿವೃದ್ಧಿ:

ಈ ಕಾರ್ಯಕ್ರಮದಡಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಹಿಂದುಳಿದ ವರ್ಗಗಳ ವಿವಿಧ ಸಮುದಾಯದ ಪ್ರವರ್ಗ-1, 2ಎ, 3ಎ ಮತ್ತು 3ಬಿ ಗೆ ಸೇರಿದ ಸಂಘ-ಸಂಸ್ಥೆಗಳಿಗೆ ಸಮುದಾಯ ಭವನ, ವಿದ್ಯಾರ್ಥಿನಿಲಯ ಕಟ್ಟಡಗಳ ನಿರ್ಮಾಣ ಹಾಗೂ ವಿದ್ಯಾರ್ಥಿ ನಿಲಯಗಳ ನಿರ್ವಹಣೆಗೆ 1 ಬಾರಿಗೆ ನಿರ್ವಹಣಾ ವೆಚ್ಚದ ಸಹಾಯಧನ ಮಂಜೂರು ಮಾಡಲಾಗುತ್ತದೆ.

ಮೇಲೆ ತಿಳಿಸಿರುವ ಎಲ್ಲಾ ಕಾರ್ಯಕ್ರಮಗಳನ್ನು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ಅನುಷ್ಠಾನ ಮಾಡಲಾಗುತ್ತಿರುತ್ತದೆ.

29.3.16

ಆಯುಕ್ತರ ಪರವಾಗಿ,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಬೆಂಗಳೂರು

C:\Users\Admin\Desktop\LAQ 2070.docx